# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 377 |
| ಮಾನ್ಯ ಸದಸ್ಯರ ಹೆಸರು | ಶ್ರೀ.ಬಿ.ಎಂ ಫಾರೂಖ್<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 19.02.2024 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೆಂಗಳೂರು ಮಹಾನಗರ ವ್ಯಾಪ್ತಿಯ ಸೂರತ್ಕಲ್ ಪಟ್ಟಣವು ವೇಗವಾಗಿ ಬೆಳೆಯುತ್ತಿರುವುದರಿಂದ ಇಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ತಾಲ್ಲೂಕು ಮಟ್ಟದ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೆ ಏರಿಸುವ ಪ್ರಸ್ತಾವನೆಯೂ ಸರಕಾರದ ಮುಂದಿದೆಯೇ | ಮಂಗಳೂರು ಮಹಾನಗರ ವ್ಯಾಪ್ತಿಯ ಸೂರತ್ಕಲ್‌ನಲ್ಲಿ ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಕಾರ್ಯನಿರ್ವಹಿಸುತ್ತಿದೆ.<br><br>ರಾಷ್ಟ್ರೀಯ ನಗರ ಆರೋಗ್ಯ ಅಭಿಯಾನದ ಮಾರ್ಗಸೂಚಿಯನ್ವಯ ನಗರ ಪ್ರದೇಶದಲ್ಲಿ 2.5 ಲಕ್ಷ ಜನ ಸಂಖ್ಯೆಗೆ ಒಂದು ನಗರ ಸಮುದಾಯ ಆರೋಗ್ಯ ಕೇಂದ್ರವನ್ನು ಸ್ಥಾಪಿಸಲು ಅವಕಾಶವಿದೆ. ಆದರೆ ಸೂರತ್ಕಲ್ ಪ್ರದೇಶದ ಜನಸಂಖ್ಯೆಯು 63,729 ಇದ್ದು, ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ. |
| ಆ | ಈ ಆಸ್ಪತ್ರೆಯನ್ನು 100 ಬೆಡ್‌ಗಳ ಆಸ್ಪತ್ರೆಯನ್ನಾಗಿ ಯಾವಾಗ ಮೇಲ್ದರ್ಜೆಗೇರಿಸಲಾಗುವುದು: | |
| ಇ | ಸೂರತ್ಕಲ್ ಪಟ್ಟಣ ಸುತ್ತಮುತ್ತ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳಿಂದ ಮಂಗಳೂರಿನ ನವಬಂದರೂ ಎಂಆರ್‌ಪಿಎಲ್, ಎಂಸಿಎಫ್ ಕೈಗಾರಿಕೆಗಳು ಹಾಗೂ ಇನ್ನೂ ಹಲವು ಸಣ್ಣ ಪ್ರಮಾಣ ಕೈಗಾರಿಕೆಗಳಿದ್ದು 30 ಸಾವಿರಕ್ಕೂ ಹೆಚ್ಚು ಕಾರ್ಮಿಕರು ಕೆಲಸ ಮಾಡುತ್ತಿದ್ದು, ಅಲ್ಲಿ ಮೇಲ್ದರ್ಜೆಯ ಆರೋಗ್ಯ ಕೇಂದ್ರದ ಅವಶ್ಯಕ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | |
| ಈ | ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? | |

ಆಕುಕ 23 ಎಸ್‌ಎಂಎಂ 2024

(ದಿನೇಶ್ ಗುಂಡೂರಾವ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಸಚಿವರು

Scanned with OKEN Scanner